**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಡಾ. ಧನಂಜಯ ಸರ್ಜಿ (ನೈರುತ್ಯ ಪದವೀಧರರ ಕ್ಷೇತ್ರ) ಇವರ ನಿಯಮ-72 ರ ಗಮನ ಸೆಳೆಯುವ ಸೂಚನೆಗೆ ಉತ್ತರ.**

ಪ್ರಶ್ನೆ:-

**ರಾಜ್ಯದ ಸರ್ಕಾರಿ ಪದವಿ ಕಾಲೇಜುಗಳಲ್ಲಿ ಹತ್ತಾರು ವರ್ಷಗಳಿಂದ ಅತಿಥಿ ಉಪನ್ಯಾಸಕರಾಗಿ ಕರ್ತವ್ಯ ನಿರ್ವಹಿಸುತ್ತಿರುವ ಉಪನ್ಯಾಸಕರ ಗೌರವಧನ ಹೆಚ್ಚಳ ಹಾಗೂ ಇವರುಗಳ ಸೇವಾ ಖಾಯಂಮಾತಿ ಮತ್ತು ಇನ್ನಿತರ ಸಮಸ್ಯೆಗಳ ಕುರಿತು.**

ಉತ್ತರ:-

ಸರ್ಕಾರದ ಸುತ್ತೋಲೆ ಸಂಖ್ಯೆ: ಇಡಿ 88 ಡಿಸಿಇ 2003, ದಿನಾಂಕ:18-12-2003 ರಲ್ಲಿ ಖಾಯಂ ಉಪನ್ಯಾಸಕರಿಗೆ ನಿಗದಿತ ಕಾರ್ಯಭಾರವನ್ನು ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರವನ್ನು ನಿರ್ವಹಿಸಲು, ಅರೆಕಾಲಿಕ ಉಪನ್ಯಾಸಕರ ಬದಲಿಗೆ, ಅತಿಥಿ ಉಪನ್ಯಾಸಕರ ಸೇವೆಯನ್ನು ಬಳಸಿಕೊಳ್ಳಲು ಅವಕಾಶ ಕಲ್ಪಿಸಲಾಗಿತ್ತು.

ಖಾಯಂ ಉಪನ್ಯಾಸಕರಿಗೆ ವಾರಕ್ಕೆ 16/20 ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿದ್ದು, ಅತಿಥಿ ಉಪನ್ಯಾಸಕರಿಗೆ ಅದರಲ್ಲಿ ಅರ್ಧದಷ್ಟು ಅಂದರೆ ಗರಿಷ್ಠ 8/10 ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಿ, ಅತಿಥಿ ಉಪನ್ಯಾಸಕರಲ್ಲಿ ಯು.ಜಿ.ಸಿ. ವಿದ್ಯಾರ್ಹತೆ ಹೊಂದಿದವರಿಗೆ ರೂ.13,000/- ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಇಲ್ಲದವರಿಗೆ ರೂ.11,000/- ಗಳ ಗೌರವಧನವನ್ನು ನಿಗದಿಪಡಿಸಲಾಗಿತ್ತು.

ಅತಿಥಿ ಉಪನ್ಯಾಸಕರುಗಳ ಗೌರವಧನ ಹೆಚ್ಚಳ ಹಾಗೂ ಇತರೆ ಬೇಡಿಕೆಗಳಿಗೆ ಸಂಬಂಧಿಸಿದಂತೆ, ವಿವರವಾದ ಅಧ್ಯಯನ ನಡೆಸಿ, ವಿಸ್ತೃತ ವರದಿಯನ್ನು ಸಲ್ಲಿಸಲು ಸರ್ಕಾರವು ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯನ್ನು ರಚಿಸಿತ್ತು.

ಉನ್ನತ ಮಟ್ಟದ ಅಧಿಕಾರಿಗಳ ಸಮಿತಿಯು ಅತಿಥಿ ಉಪನ್ಯಾಸಕರ ವಿವಿಧ ಬೇಡಿಕೆಗಳನ್ನು ಕಾನೂನಾತ್ಮಕವಾಗಿ, ಆಡಳಿತಾತ್ಮಕವಾಗಿ ಮತ್ತು ಆರ್ಥಿಕ ಪರಿಸ್ಥಿತಿಗೆ ಅನುಗುಣವಾಗಿ ಪರಿಶೀಲಿಸಿ, ಸರ್ಕಾರಕ್ಕೆ ಸಲ್ಲಿಸಿದ್ದ ವಿಸ್ತೃತ ವರದಿಯನ್ನು ಪರಿಶೀಲಿಸಿ, ಸರ್ಕಾರದ ಆದೇಶ ಸಂಖ್ಯೆ: ಇಡಿ 242 ಡಿಸಿಇ 2021, ದಿನಾಂಕ:14.01.2022 ಮತ್ತು 24.01.2022 ರಲ್ಲಿ ಅತಿಥಿ ಉಪನ್ಯಾಸಕರಿಗೆ ನೀಡಲಾಗುತ್ತಿದ್ದ ಗರಿಷ್ಠ 8/10 ಗಂಟೆಗಳ ಬದಲಾಗಿ, ಗರಿಷ್ಠ 15/19 ಗಂಟೆಗಳ ಕಾರ್ಯಭಾರವನ್ನು ನೀಡಿ, ಅವರ ಸೇವಾ ಅವಧಿ ಹಾಗೂ ಯು.ಜಿ.ಸಿ. ವಿದ್ಯಾರ್ಹತೆ ಆಧರಿಸಿ ಗೌರವಧನವನ್ನು ಈ ಕೆಳಗಿನಂತೆ ಹೆಚ್ಚಿಸಲಾಗಿತ್ತು.

ಅ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.32,000/-

ಆ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ ರೂ.30,000/-

ಇ) 5 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಅವಧಿಗೆ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.28,000/-

ಈ) 5 ವರ್ಷಕ್ಕಿಂತ ಕಡಿಮೆ ಅವಧಿಗೆ ಮತ್ತು ಯು.ಜಿ.ಸಿ. ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ ರೂ.26,000/-

ಮುಂದುವರೆದು, ನನ್ನ ಅಧ್ಯಕ್ಷತೆಯಲ್ಲಿ ದಿನಾಂಕ:22.12.2023ರಂದು ಜರುಗಿದ ಸಭೆಯಲ್ಲಿ ನಿರ್ಣಯಿಸಲಾದಂತೆ ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:04-03-2024 ಮತ್ತು ತಿದ್ದುಪಡಿ ಆದೇಶ ದಿನಾಂಕ:16-03-2024ರಲ್ಲಿ ಅತಿಥಿ ಉಪನ್ಯಾಸಕರಿಗೆ ಪ್ರಸ್ತುತ ಪಾವತಿಸಲಾಗುತ್ತಿರುವ ಗೌರವಧನವನ್ನು ಅವರುಗಳ ಸೇವಾ ಅವಧಿಯ ಆಧಾರದ ಮೇಲೆ ರೂ.5,000/- ರಿಂದ ರೂ.8,000/- ದವರೆಗೆ ಹೆಚ್ಚಿಸಿ ಆದೇಶಿಸಲಾಗಿರುತ್ತದೆ.

1) ಗೌರವಧನ:

| ಕ್ರ. ಸಂ. | ಸೇವಾವಧಿ ಮತ್ತು ವಿದ್ಯಾರ್ಹತೆ | ಪ್ರಸ್ತುತ ಗೌರವಧನದ ಮೊತ್ತ | ಪರಿಷ್ಕರಿಸಿದ ಗೌರವಧನದ ಮೊತ್ತ | ಒಟ್ಟು ಗೌರವಧನದ ಮೊತ್ತ |
|---|---|---|---|---|
| 1 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ. | 30,000/- | 5,000/- | 35,000/- |
| 2 | 5 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ. | 26,000/- | 5,000/- | 31,000/- |
| 3 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ. | 32,000/- | 6,000/- | 38,000/- |
| 4 | 5 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 10 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ. | 28,000/- | 6,000/- | 34,000/- |
| 5 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ. | 32,000/- | 7,000/- | 39,000/- |
| 6 | 10 ವರ್ಷ ಹಾಗೂ ಅದಕ್ಕಿಂತ ಹೆಚ್ಚಿನ ಮತ್ತು 15 ವರ್ಷಕ್ಕಿಂತ ಕಡಿಮೆ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ. | 28,000/- | 7,000/- | 35,000/- |
| 7 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿರುವವರಿಗೆ. | 32,000/- | 8,000/- | 40,000/- |
| 8 | 15 ವರ್ಷ ಮತ್ತು ಅದಕ್ಕಿಂತ ಹೆಚ್ಚಿನ ಸೇವಾವಧಿ ಸಲ್ಲಿಸಿರುವವರಿಗೆ & ಯುಜಿಸಿ ನಿಗಧಿಪಡಿಸಿದ ವಿದ್ಯಾರ್ಹತೆ ಹೊಂದಿಲ್ಲದವರಿಗೆ. | 28,000/- | 8,000/- | 36,000/- |

### 2) ಇಡಿಗಂಟು ಸೌಲಭ್ಯ:

ಮುಂದುವರೆದು, ಸದರಿ ಆದೇಶದಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಅತಿಥಿ ಉಪನ್ಯಾಸಕರುಗಳಾಗಿ ಸೇವೆ ಸಲ್ಲಿಸಿದ 60 ವರ್ಷ ಮೀರಿದ ಅತಿಥಿ ಉಪನ್ಯಾಸಕರುಗಳಿಗೆ ಭದ್ರತಾ ರೂಪದಲ್ಲಿ ವಾರ್ಷಿಕ ರೂ.50,000/- ದಂತೆ ಗರಿಷ್ಠ 5.00 ಲಕ್ಷಗಳ ಮೊತ್ತದ ಇಡಿಗಂಟಿನ ಸೌಲಭ್ಯವನ್ನು ನೀಡಲು ಮಂಜೂರಾತಿ ನೀಡಲಾಗಿರುತ್ತದೆ.

### 3) ಆರೋಗ್ಯ ವಿಮಾ ಸೌಲಭ್ಯ:

ಹಾಗೆಯೇ, ಅತಿಥಿ ಉಪನ್ಯಾಸಕರ ಆರೋಗ್ಯ ದೃಷ್ಟಿಯಿಂದ ವಾರ್ಷಿಕ ರೂ.5.00 ಲಕ್ಷಗಳ ಆರೋಗ್ಯ ವಿಮಾ ಸೌಲಭ್ಯವನ್ನು ನೀಡುವ ನಿಟ್ಟಿನಲ್ಲಿ (ಅತಿಥಿ ಉಪನ್ಯಾಸಕರಿಂದ ವಂತಿಗೆ ರೂಪದಲ್ಲಿ ಮಾಸಿಕ ರೂ.400 + ಸರ್ಕಾರದಿಂದ ರೂ.400 ಒಟ್ಟು ರೂ.800/-) ಆರೋಗ್ಯ ವಿಮಾ ಸೌಲಭ್ಯವನ್ನು ಅನುಷ್ಠಾನಗೊಳಿಸಲು ಮಂಜೂರಾತಿ ನೀಡಲಾಗಿರುತ್ತದೆ.

### 4) ಸಾಂಧರ್ಬಿಕ ರಜೆ ಸೌಲಭ್ಯ:

ಸರ್ಕಾರದ ಆದೇಶ ಸಂಖ್ಯೆ ಇಡಿ 36 ಡಿಸಿಇ 2024 (ಇ), ದಿನಾಂಕ:14-03-2024 ರಲ್ಲಿ ಕಾಲೇಜು ಶಿಕ್ಷಣ ಇಲಾಖೆಯ ವ್ಯಾಪ್ತಿಯ ಸರ್ಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ 15/19 ಗಂಟೆಗಳ ಕಾರ್ಯಭಾರ ನಿರ್ವಹಿಸುವ ಅತಿಥಿ ಉಪನ್ಯಾಸಕರಿಗೆ ತಿಂಗಳಿಗೆ 01 ದಿನ ಸಾಂದರ್ಭಿಕ ರಜೆಯನ್ನು, ಸದರಿ 01 ದಿನದ ಕಾರ್ಯಭಾರವನ್ನು ಇತರೆ ದಿನಗಳಲ್ಲಿ ಸರಿದೂಗಿಸಿಕೊಳ್ಳುವ ಷರತ್ತಿಗೊಳಪಟ್ಟು ಮಂಜೂರು ಮಾಡಿ ಆದೇಶಿಸಲಾಗಿರುತ್ತದೆ.

ಈ ಮೇಲ್ಕಂಡ ಎಲ್ಲಾ ಸೌಲಭ್ಯಗಳು ಅತಿಥಿ ಉಪನ್ಯಾಸಕರಿಗೆ ದಿನಾಂಕ:01-01-2024ರಿಂದ ಪೂರ್ವಾನ್ವಯವಾಗಿ ಜಾರಿಗೆ ಬಂದಿರುತ್ತವೆ. ಅದರಂತೆ ಈಗಾಗಲೇ 2024ನೇ ಸಾಲಿಗೆ ಅನ್ವಯಿಸುವಂತೆ ಸುಮಾರು 27 ಅತಿಥಿ ಉಪನ್ಯಾಸಕರು ನಿವೃತ್ತಿ ಹೊಂದಲಿದ್ದು, ಸದರಿಯವರಿಗೆ ಇಡಿಗಂಟು ಯೋಜನೆಯನ್ನು ಜಾರಿಗೊಳಿಸಲು ಗರಿಷ್ಠ ರೂ. 135.00 ಲಕ್ಷಗಳ ಅನುದಾನ ಅವಶ್ಯವಿದ್ದು, ಈ ಅನುದಾನದ ಲಭ್ಯತೆಯ ಬಗ್ಗೆ ಪರಿಶೀಲಿಸಲಾಗುತ್ತಿದ್ದು, ಸದರಿ ಅನುದಾನ ಲಭ್ಯವಾದ ಕೂಡಲೇ ಅನುಷ್ಠಾನಗೊಳಿಸಲು ಕ್ರಮವಹಿಸಲಾಗುವುದು. ಮುಂದುವರೆದು, ಅತಿಥಿ ಉಪನ್ಯಾಸಕರಿಗೆ ಆರೋಗ್ಯ ವಿಮೆ ನೀಡುವ ಸಂಬಂಧ ಟೆಂಡರ್ ಪ್ರಕ್ರಿಯೆ ಕೈಗೊಳ್ಳುವ ಬಗ್ಗೆ ಪರಿಶೀಲನೆಯಲ್ಲಿದೆ.

ಇಲಾಖೆಯಲ್ಲಿ ಅತಿಥಿ ಉಪನ್ಯಾಸಕರನ್ನು ಯಾವುದೇ ಖಾಲಿ ಹುದ್ದೆಗಳ ಎದುರಾಗಿ ನೇಮಕಾತಿ ಮಾಡಲಾಗುವುದಿಲ್ಲ. ಬದಲಾಗಿ, ಕಾಲೇಜುಗಳಲ್ಲಿ ಲಭ್ಯವಾಗುವ ಕಾರ್ಯಭಾರವನ್ನು ಮೊದಲು ಖಾಯಂ ಉಪನ್ಯಾಸಕರಿಗೆ ಹಂಚಿಕೆ ಮಾಡಿದ ನಂತರ ಉಳಿಕೆಯಾಗುವ ಕಾರ್ಯಭಾರಕ್ಕೆ ಮಾತ್ರ ತಾತ್ಕಾಲಿಕವಾಗಿ ಅತಿಥಿ ಉಪನ್ಯಾಸಕರನ್ನು ಆಯ್ಕೆ ಮಾಡಲಾಗುತ್ತದೆ. ಆದ್ದರಿಂದ ತಾತ್ಕಾಲಿಕ ವ್ಯವಸ್ಥೆಯಡಿ ಕಾರ್ಯನಿರ್ವಹಿಸುತ್ತಿರುವ ಅತಿಥಿ ಉನ್ಯಾಸಕರಿಗೆ ಸೇವಾ ಭದ್ರತೆ ನೀಡಲು ನಿಯಮಗಳಲ್ಲಿ ಅವಕಾಶ ಇರುವುದಿಲ್ಲ.

**ಸಂಖ್ಯೆ: ಇಡಿ 405 ಡಿಸಿಇ 2024(ಇ)**

(ಡಾ. ಎಂ. ಸಿ. ಸುಧಾಕರ್)
ಉನ್ನತ ಶಿಕ್ಷಣ ಸಚಿವರು